ಕರ್ನಾಟಕ ಸರ್ಕಾರ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ,

6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003

ದಿನಾಂಕ: 22-04-2026

**ಮಾಧ್ಯಮ ಪ್ರಕಟಣೆಗಾಗಿ**

ಪ್ರಿಯ ವಿದ್ಯಾರ್ಥಿಗಳೇ,

ದಿನಾಂಕ: 23-04-2026 ರಂದು ಮಧ್ಯಾಹ್ನ 12.00 ಗಂಟೆಗೆ 2026ರ ಎಸ್.ಎಸ್.ಎಲ್.ಸಿ ಪರೀಕ್ಷೆ-1ರ ಫಲಿತಾಂಶವನ್ನು ಪ್ರಕಟಿಸಲಾಗುತ್ತದೆ. ಸದರಿ ಫಲಿತಾಂಶವನ್ನು https://karresults.nic.in ಲಿಂಕ್ ಮೂಲಕ ಹಾಗೂ KarnatakaOne Mobile App ಮೂಲಕವೂ ಪಡೆಯಬಹುದಾಗಿದೆ. ಅಲ್ಲದೆ, ವಿದ್ಯಾರ್ಥಿಗಳ ನೊಂದಾಯಿತ ಮೊಬೈಲ್ ಸಂಖ್ಯೆಗೆ ವಾಟ್ಸಾಪ್/ಎಸ್ಎಂಎಸ್ (SMS) ಮೂಲಕವೂ ಫಲಿತಾಂಶದ ಮಾಹಿತಿಯನ್ನು ಮಂಡಲಿಯಿಂದ ರವಾನಿಸಲಾಗುವುದು.

ಈ ವರ್ಷ ಪ್ರಥಮ ಬಾರಿಗೆ ವಿಶೇಷವಾಗಿ, ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿಯನ್ನು (Marks Card) ಡಿಜಿಲಾಕರ್ (DigiLocker) ಮೂಲಕ ದಿನಾಂಕ:23-04-2026 ರಂದು ಮಧ್ಯಾಹ್ನ 12.00 ಗಂಟೆಗೆ ಲಭ್ಯಗೊಳಿಸಲಾಗುವುದು. https://www.digilocker.gov.in ಅನ್ನು ಬಳಸಿ ಅಂಕಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅಂಕಪಟ್ಟಿಯನ್ನು ಡಿಜಿಲಾಕರ್ ನಿಂದ ಡೌನ್‌ಲೋಡ್ ಮಾಡಿಕೊಳ್ಳುವ ಪ್ರಕ್ರಿಯೆಯನ್ನು ಈ Video link https://tinyurl.com/mw84wmh9 ಅನ್ನು ಬಳಸಿ ತಿಳಿದುಕೊಳ್ಳಬಹುದು. ಫಲಿತಾಂಶ ಪಟ್ಟಿಯನ್ನು ಸಂಬಂಧಿತ ಶಾಲೆಗಳಿಗೆ ದಿನಾಂಕ: 23-04-2026 ರಂದು ಮಧ್ಯಾಹ್ನ 12.00 ಗಂಟೆಗೆ ಲಭ್ಯಗೊಳಿಸಲಾಗುವುದು.

ಈ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ತಿಳಿಸಲು ಮಂಡಲಿಯು ಹರ್ಷಿಸುತ್ತದೆ.

**ಅಧ್ಯಕ್ಷರು**
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ